**MVC-529/2024** **ಆರ್.ಡಬ್ಲ್ಯೂ-1 (ಗುರುರಾಜಶೆಟ್ಟಿ)**

ದಿನಾಂಕಃ **04.04.2025** ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : 2 ನೇ ಎದುರುದಾರರ ಪರ ಶ್ರೀ. ಡಿ.ಜಿ.ಎನ್. ವಕೀಲರಿಂದಃ**

(ಸಾಕ್ಷಿ ತಮ್ಮ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿ, ಸದರಿ ಪ್ರಮಾಣ ಪತ್ರದಲ್ಲಿ ಬರೆಸಿರುವ ವಿಷಯಗಳನ್ನು ಓದಿಸಿ ಕೇಳಿ ತಿಳಿದುಕೊಂಡು ಸರಿ ಮತ್ತು ಸತ್ಯವಾಗಿರುತ್ತವೆ ಎಂದು ಸಹಿ ಮಾಡಿರುವುದಾಗಿ ತಿಳಿಸಿರುತ್ತಾರೆ.)

ಈ ಪ್ರಕರಣದಲ್ಲಿ ಭಾಗಿಯಾದ ವಾಹನದ ನೋಂದಣಿ ಸಂಖ್ಯೆ KA-11-EQ-7875, ಇದರ ವಿಮೆಯ ಪಾಲಿಸಿಯ ದೃಢೀಕೃತ ನಕಲನ್ನು ಹಾಜರುಪಡಿಸಿರುತ್ತೇನೆ, ಅದನ್ನು **ನಿ.ಆರ್-2** ಎಂದು, 1 ನೇ ಎದುರುದಾರನಿಗೆ ನೀಡಿದ ನೋಟೀಸಿನ ಪ್ರತಿಯನ್ನು **ನಿ.ಆರ್-3** ಎಂದು, ಅಂಚೆ ರಶೀದಿಯನ್ನು **ನಿ.ಆರ್-4** ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿಯನ್ನು ವಜಾ ಮಾಡಲು ಪ್ರಾರ್ಥಿಸುತ್ತೇನೆ.

**ಪಾಟೀ ಸವಾಲುಃ ಅರ್ಜಿದಾರರ ಪರ ಶ್ರೀ. ಡಿ.ಎಂ.ಎಂ. ವಕೀಲರಿಂದಃ**

1 ನೇ ಎದುರುದಾರನಿಗೆ ನೀಡಿದ ನೋಟೀಸ್ ಜಾರಿಯಾದ ಬಗ್ಗೆ ಯಾವುದೇ ದಾಖಲೆ ಹಾಜರುಮಾಡಿಲ್ಲ. ಪೊಲೀಸರು ಸರಿಯಾಗಿ ತನಿಖೆ ಮಾಡದೇ ಚಾಲಕನಿಗೆ ಚಾಲನಾ ಪರವಾನಗಿ ಇರುವುದಿಲ್ಲ ಎಂದು ದೋಷಾರೋಪಣಾ ಪಟ್ಟಿಯಲ್ಲಿ ತಿಳಿಸಿರುವುದನ್ನು ಆಧರಿಸಿ ನಾನು ಸಹ ಚಾಲಕನಿಗೆ ಚಾಲನಾ ಪರವಾನಗಿ ಇರಲಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಚಾಲಕನಿಗೆ ಚಾಲನಾ ಪರವಾನಗಿ ಇರುವುದರಿಂದ ನಾವೇ ಪರಿಹಾರ ಕೊಡಲು

ಭಾದ್ಯಸ್ಥರಿದ್ದರೂ ಸಹ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳುವ ಉದ್ದೇಶಕ್ಕಾಗಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ, ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆಃ</u> ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಈ ದಿನ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇ**

**ಅಪರ ಹಿರಿಯ ಸಿಜೆ ಮತ್ತು ಎಂಎಸಿಟಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**